**OS 112/2015**
**PW-1**

**<u>ದಿನಾಂಕಃ 15.06.2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

<u>ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ. ಎಸ್ ಆರ್ ವಕೀಲರಿಂದಃ</u>

ನಿಪಿ-8 ರ ಪಹಣಿ ಪತ್ರಿಕೆಯ ಸರ್ವೆ ನಂಬರ್ ಮತ್ತು ಸದರಿ ಸರ್ವೆ ನಂಬರ್ ಯಾರ ಹೆಸರಿನಲ್ಲಿ ಇದೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಅನುಸೂಚಿ ಸ್ವತ್ತುಗಳಲ್ಲಿ ಕೆಲವು ಆಸ್ತಿಗಳು ನನ್ನ ತಂದೆಯ ಸ್ವಯಾರ್ಜಿತ ಆಸ್ತಿಗಳಾಗಿವೆ ಎಂದರೆ ಸರಿಯಲ್ಲ. ನನ್ನ ತಂದೆಯು ದಿನಾಂಕ 22.08.2018 ರಂದು ಮರಣ ಹೊಂದಿರುತ್ತಾರೆ ಎಂದರೆ ಸರಿ. ನಿಪಿ-11 ರ ದಾಖಲಾತಿಯನ್ನು ಈ ದಾವೆ ಸಲ್ಲಿಸುವ ಪೂರ್ವದಲ್ಲಿ ಹಾಜರು ಪಡಿಸಿಲ್ಲ ಎಂದರೆ ಸರಿ.ನಾನು ಈಗ ನನ್ನ ಪತಿಯ ಮನೆಯಲ್ಲಿ ವಾಸಿಸುತ್ತಿದ್ದೇನೆ ಎಂದರೆ ಸರಿ. ನನ್ನ ಪತಿಯ ಮನೆಯಲ್ಲಿ ನಾವು ವಾಸಿಸಲು ನಮಗೆ ಸ್ವಂತ ಮನೆ ಇದೆ ಎಂದರೆ ಸರಿ. ದಾವಾ ಅನುಸೂಚಿ ಸ್ವತ್ತುಗಳಲ್ಲಿ ನನಗೆ ಯಾವುದೇ ರೀತಿಯ ಹಕ್ಕು ಇಲ್ಲದೇ ಇದ್ದರೂ ಸಹ ಸುಳ್ಳು ದಾವೆಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಗಳ ಮೇಲೆ ಪ್ರತಿವಾದಿಯವರು ಸರ್ಕಾರದಿಂದ ಸಾಲವನ್ನು ಪಡೆದುಕೊಂಡು ವ್ಯವಸಾಯ ಮಾಡುತ್ತಾ ಜೀವಿಸುತ್ತಾ ಇದ್ದಾರೆ ಎಂದರೆ ಸರಿಯಲ್ಲ. ಸದರಿ ಸಾಲವನ್ನು ಇಲ್ಲಿಯವರೆಗೂ ತೀರಿಸಲು ಸಾಧ್ಯವಾಗಿಲ್ಲ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ</u>** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಲಯ, ಟಿ ನರಸಿಪುರ